**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ, ರಾಯಚೂರು**
**ಸಿ.ಸಿ. ನಂಬರ. 4173/2024**

**CW-10 / PW-4**

| | | |
|---|---|---|
| ಸಾಕ್ಷಿದಾರನ ಹೆಸರು | : | ಶರಣಮ್ಮ |
| ಗಂಡನ ಹೆಸರು | : | ನಾಗರಾಜ |
| ವಯಸ್ಸು | : | 41 |
| ಉದ್ಯೋಗ | : | ಡಬ್ಲ್ಯೂ ಹೆಚ್ ಸಿ 278<br>ಮಾರ್ಕೆಟ ಯಾರ್ಡ ಪೋ ಠಾ |
| ವಿಳಾಸ | : | ರಾಯಚೂರು |

**ಮುಖ್ಯ ವಿಚಾರಣೆ ಅಭಿಯೋಜನೆ ಪರ ಮಾನ್ಯ ಹಿರಿಯ ಸ.ಸ.ಅ. ಅವರಿಂದ**

**ಪ್ರಮಾಣೀಕರಿಸಿದ ದಿನಾಂಕ : 16-12-2025**

ನಾನು 16-06-2023 ರಿಂದ ಇಲ್ಲಿಯ ವರೆಗೆ ಮಾರ್ಕೆಟ ಯಾರ್ಡ ಪೊಲೀಸ ಠಾಣೆಯಲ್ಲಿ ಮಹಿಳಾ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 18-08-2024 ರಂದು ಬೆಳಿಗ್ಗೆ 8-00 ಗಂಟೆರಿಂದ 2-00 ಗಂಟೆ ವರೆಗೆ ನಾನು ಠಾಣಾ ಕರ್ತವ್ಯದಲ್ಲಿ ಇದ್ದಾಗ , ಚಾಸಾ-1 ರವರು ಬೆಳಿಗ್ಗೆ 9-55 ಗಂಟೆಗೆ ದಾಳಿ ಪಂಚನಾಮೆ ಜೊತೆ ಆರೋಪಿ ಮತ್ತು ಮುದ್ದೆ ಮಾಲನ್ನು ತೆಗೆದುಕೊಂಡು ನನಗೆ ದೂರನ್ನು ಸಲ್ಲಿಸಿರುತ್ತಾರೆ. ಸದರಿ ದೂರನ್ನು ಸ್ವೀಕರಿಸಿ ಗುನ್ನೆ ನಂ.54/2024 ರಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರ.ವ ವರದಿಯನ್ನು ಪಿಸಿ 310 ರವರ ಜೊತೆ ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ಚಾಸಾ-1 ರವರು ಕೊಟ್ಟ ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು , ಅದನ್ನು ನಿಪಿ-5 ಎಂದು ಸಾಕ್ಷಿ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಪ್ರ.ವ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಚಾಸಾ-4 ರಿಂದ 7 ರವರ ಹೇಳಿಕೆಗಳನ್ನು ಅದೇ ದಿನ ಪಡೆದುಕೊಂಡಿರುತ್ತೇನೆ. ದಿಃ 31-08-2024 ರಂದು ಎಫ್.ಎಸ್.ಎಲ್. ಗೆ ಕಳುಹಿಸಿ ಕೊಡಲು ಡಿವೈಎಸ್ ಪಿ ರವರಿಗೆ ಪತ್ರ ಬರೆಯಲಾಯಿತು. ಅದೇ ದಿನ ಆರೋಪಿಗೆ ನೋಟಿಸನ್ನು ಕೊಟ್ಟು ಜಾಮೀನಿನ ಮೇಲೆ ಬಿಡಲಾಯಿತು. ಚಾಸಾ-8 ರವರಿಗೆ ಎಫ್ ಎಸ್ ಎಲ್ ವರದಿಯನ್ನು ಸ್ವೀಕರಿಸಲು ಕಳುಹಿಸಲಾಯಿತು. ಸಾಕ್ಷಿಯು ಎಫ್ ಎಸ್ ಎಲ್ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಈ ಬಗ್ಗೆ ಚಾಸಾ-8 ರವರು ಒಂದು ವರದಿಯನ್ನು ಸಲ್ಲಿಸಿರುತ್ತಾರೆ

ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-8 ಎಂದು ಸಾಕ್ಷಿ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ದಿಃ 18-08-2024 ರಂದು ಚಾಸಾ-4 ರವರು ನೀಡಿದ ಭಾರತೀಯ ಸಾಕ್ಷ ಅಧಿನಿಯಮ ಕಲಂ 63 ಪ್ರಮಾಣ ಪತ್ರವನ್ನು ನೀಡಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಆರೋಪಿಯ ವಿರುದ್ದ ದೋಷಾರೋಪಣೆ ಸಾಭೀತು ಆಗಿದ್ದರಿಂದ ದಿಃ 10-09-2024 ರಂದು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ಮು ಮಾ-1 ನ್ನು ನೋಡಿ ಗುರುತಿಸಿರುತ್ತಾರೆ. ಚಾಸಾ-1 ರವರು ನೀಡಿದ ಪಂಚನಾಮೆಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಕೆ ಅರ್ ಎನ್ ವಕೀಲರಿಂದ :**

ಗುನ್ಹೆ ಸ್ಥಳವು ತುಂಬಾ ಜನರಿಂದ ಕೂಡಿದ ಸ್ಥಳವಾಗಿರುತ್ತದೆ ಎಂದರೆ ಸರಿ. ಮು ಮಾ-1 ನ್ನು ಎಫ್ ಎಸ್ ಎಲ್ ಗೆ ಕಳುಹಿಸಲು 12 ದಿನ ವಿಳಂಬ ಇರುತ್ತದೆ ಎಂದರೆ ಸಾಕ್ಷಿಯು ಡಿಎಸ್ ಪಿ ಸಾಹೇಬರ ಅನುಮತಿಗಾಗಿ ವಿಳಂಬವಾಗಿರುತ್ತದೆ ಎಂದು ನುಡಿಯುತ್ತಾರೆ. ಡಿಎಸ್ ಪಿ ಯವರಿಗೆ ಬರೆದಂತಹ ಅನುಮತಿ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ ಎಂದರೆ ಸರಿ. ನಾನು ಚಾಸಾ-4 ರಿಂದ 8 ರವರ ಹೇಳಿಕೆಗಳನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಠಾಣೆಯ ಅಂಕಿ ಸಂಖ್ಯೆಗೋಸ್ಕರ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮುದ್ದೆ ಮಾಲಿಗೂ ಮತ್ತು ಆರೋಪಿಗೂ ಯಾವುದೆ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ- ಇಲ್ಲ**

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನೆ ಮೇರೆಗೆ ಬೆರಳಚ್ಚುಗಾರರು ಬೆರಳಚ್ಚು ಮಾಡಿರುತ್ತಾರೆ ಮತ್ತು ಅದನ್ನು ಸಾಕ್ಷಿಗೆ ಓದಿ ತಿಳಿಸಿ ಹೇಳಿದಾಗ ಸಾಕ್ಷಿ ಸರಿ ಇದೆ ಅಂತಾ ಒಪ್ಪಿಕೊಂಡಿರುತ್ತಾರೆ.)

**ಪ್ರಧಾನ ಹಿರಿಯ ಸಿ.ಜೆ ಮತ್ತು ಸಿಜೆಎಂ, ರಾಯಚೂರು.**